All India Radio: Bangalore
National Bulletin In Kannada
18.09.2026  7.35  pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಇಪ್ಪತ್ತನೇ ಆವೃತ್ತಿಯ ಉದ್ಯೋಗ ಮೇಳ; ನಾಳೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ೫೧ ಸಾವಿರ ಅಭ್ಯರ್ಥಿಗಳಿಗೆ ನೇಮಕಪತ್ರ ವಿತರಣೆ
- ಭಾರತೀಯ ವಾಯುಪಡೆಗೆ ತರಬೇತಿ ವಿಮಾನ, ಹೆಲಿಕಾಪ್ಟರ್ ಹಸ್ತಾಂತರಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
- ಜಾಗತಿಕ ಸೆಮಿಕಂಡಕ್ಟರ್ ಉದ್ಯಮದಲ್ಲಿ ಭಾರತ ವಿಶ್ವಾಸಾರ್ಹ ಪಾಲುದಾರ ರಾಷ್ಟ್ರ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
- ಪ್ರಾದೇಶಿಕ ಶಾಂತಿ, ಭದ್ರತೆ, ಸ್ಥಿರತೆಗೆ ಸಹಕಾರ ಮುಂದುವರಿಕೆ: ಭಾರತ-ಯುಎಇ ಪುನರುಚ್ಚರ

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ನಡೆಯಲಿರುವ ೨೦ನೇ ಆವೃತ್ತಿಯ ಉದ್ಯೋಗ ಮೇಳದಲ್ಲಿ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ, ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಈ ಉದ್ಯೋಗ ಮೇಳವು ದೇಶಾದ್ಯಂತ ೪೫ ಸ್ಥಳಗಳಲ್ಲಿ ನಡೆಯಲಿದೆ. ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳು, ಭಾರತ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೇರ್ಪಡೆಗೊಳ್ಳಲಿದ್ದಾರೆ. ಇವುಗಳಲ್ಲಿ ಕಂದಾಯ ಇಲಾಖೆ, ರೈಲ್ವೆ ಸಚಿವಾಲಯ, ಗೃಹ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಹಣಕಾಸು ಸೇವೆಯ ಇಲಾಖೆ ಹಾಗೂ ರಕ್ಷಣಾ ಸಚಿವಾಲಯ ಸೇರಿದೆ. ಯುವಕರಿಗೆ ಉದ್ಯೋಗಾವಕಾಶ ಸೃಷ್ಟಿಸುವ ಮತ್ತು ದೇಶದ ಅಭಿವೃದ್ಧಿ ಪಯಣದಲ್ಲಿ ಹೆಚ್ಚಿನ ಭಾಗವಹಿಸುವಿಕೆ ಖಚಿತಪಡಿಸುವ ಸರ್ಕಾರದ ನಿರಂತರ ಪ್ರಯತ್ನವನ್ನು ಉದ್ಯೋಗ ಮೇಳ ಪ್ರತಿಬಿಂಬಿಸುತ್ತದೆ.

<>><><*><><<>

ಎಚ್‌ಎಎಲ್ ಸಂಸ್ಥೆ ತಯಾರಿಸಿದ ವಿವಿಧ ತರಬೇತಿ ವಿಮಾನ ಹಾಗೂ ಹೆಲಿಕಾಪ್ಟರ್‌ಗಳನ್ನು ಭಾರತೀಯ ವಾಯುಪಡೆ ಮತ್ತು ಪವನ್ ಹನ್ಸ್ ಸಂಸ್ಥೆಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬೆಂಗಳೂರಿನಲ್ಲಿಂದು ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ವಿಮಾನಯಾನ ಸಚಿವ ಕೆ.ರಾಮ್ ಮೋಹನ್ ನಾಯ್ಡು ಉಪಸ್ಥಿತರಿದ್ದರು. ಭಾರತೀಯ ವಾಯುಪಡೆಗೆ ಎರಡು ತೇಜಸ್ ತರಬೇತಿ ವಿಮಾನಗಳು ಹಾಗೂ ಮೊದಲ ಎಫ್‌ಟಿಟಿ ೪೦ ತರಬೇತಿ ವಿಮಾನವನ್ನು ಹಸ್ತಾಂತರಿಸಲಾಯಿತು. ೨೦೩೩-೩೪ರ ವೇಳೆಗೆ ಎಚ್.ಎ.ಎಲ್ ವಾಯುಪಡೆಗೆ ೯೭ ಎಂ.ಕೆ-೧ಎ ಎರಡು ಆಸನದ ವಿಮಾನಗಳನ್ನು ತಲುಪಿಸುವ ಗುರಿ ಹೊಂದಿದೆ. ಇದರ ಜೊತೆಗೆ ಧ್ರುವ್ ಎನ್ ಜಿ ಹೆಲಿಕಾಪ್ಟರ್‌ಗಳನ್ನು ಪವನ್ ಹನ್ಸ್ ಸಂಸ್ಥೆಗೆ ಹಸ್ತಾಂತರಿಸಲಾಯಿತು. ನಾಗರಿಕ ವಿಮಾನಯಾನ ವಲಯಕ್ಕೆ ಸೇರ್ಪಡೆಯಾಗುತ್ತಿರುವ ಧ್ರುವ್ ಎನ್.ಜಿ, ಎ.ಎಸ್-೪ ನಿಯಮಾವಳಿಗಳಿಗೆ ಅನುಗುಣವಾಗಿ ಭಾರತದಲ್ಲೇ ಸಂಪೂರ್ಣ ದೇಶೀಯವಾಗಿ ನಿರ್ಮಾಣಗೊಂಡ ಮೊದಲ ನಾಗರಿಕ ಹೆಲಿಕಾಪ್ಟರ್ ಆಗಿದೆ. ರಕ್ಷಣಾ ಸಚಿವಾಲಯ ೭೦, ಎಫ್‌ಟಿಟಿ ೪೦ ವಿಮಾನಗಳ ಪೂರೈಕೆಗೆ ಒಪ್ಪಂದ ಮಾಡಿಕೊಂಡಿದ್ದು, ಇವುಗಳ ಸೇರ್ಪಡೆ ಭಾರತೀಯ ವಾಯುಪಡೆಯ ಪೈಲಟ್ ತರಬೇತಿ ಕ್ಷೇತ್ರದಲ್ಲಿ ದೇಶದ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲಿದೆ. ಇದೇ ವೇಳೆ ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಈ ಸಾಧನೆ, ಭಾರತದ ಏರೋಸ್ಪೇಸ್ ಕ್ಷೇತ್ರದಲ್ಲಿನ ತಾಂತ್ರಿಕ ಹಾಗೂ ಆತ್ಮನಿರ್ಭರತೆಯ ಜೊತೆಗೆ ಪ್ರಗತಿಪಥದ ಮಹತ್ವದ ಮೈಲಿಗಲ್ಲು ಎಂದು ಶ್ಲಾಘಿಸಿದ್ದಾರೆ. ಪ್ರಸ್ತುತ ದಿನಗಳಲ್ಲಿ ಯುದ್ಧ ತಂತ್ರಜ್ಞಾನ ಬದಲಾಗುತ್ತಿದ್ದು, ವಾಯುಪಡೆಯನ್ನು ಮತ್ತಷ್ಟು ಅಭಿವೃದ್ಧಿಗೊಳಿಸುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

<>><><*><><<>

ಜಾಗತಿಕ ಸೆಮಿಕಂಡಕ್ಟರ್ ಉದ್ಯಮದಲ್ಲಿ ಭಾರತ ವಿಶ್ವಾಸಾರ್ಹ ಪಾಲುದಾರನಾಗಿ ಹೊರಹೊಮ್ಮುತ್ತಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ 'ಸೆಮಿಕಾನ್ ಇಂಡಿಯಾ ೨೦೨೫' ಕಾರ್ಯಕ್ರಮದ ಸಂವಾದವೊಂದರಲ್ಲಿ ಮಾತನಾಡಿದ ಅವರು, ಬೌದ್ಧಿಕ ಆಸ್ತಿಯ ರಕ್ಷಣೆಯಿಂದ ಹಿಡಿದು ಜಾಗತಿಕ ಕಂಪನಿಗಳು ಭಾರತದಲ್ಲಿಯೇ ಸಂಪೂರ್ಣ ಉತ್ಪನ್ನಗಳನ್ನು ವಿನ್ಯಾಸಗೊಳಿಸಲು ಅನುವು ಮಾಡಿಕೊಡುವವರೆಗೆ, ಸೆಮಿಕಂಡಕ್ಟರ್ ಉದ್ಯಮದಲ್ಲಿ ವಿಶ್ವಾಸ ಎಂಬುದು ಅತ್ಯಂತ ನಿರ್ಣಾಯಕವಾಗಿದೆ ಎಂದು ಪ್ರತಿಪಾದಿಸಿದರು. ಮುಂದಿನ ಹತ್ತು ವರ್ಷಗಳಲ್ಲಿ ೮೫ ಸಾವಿರ ಸೆಮಿಕಂಡಕ್ಟರ್ ವಿನ್ಯಾಸ ಎಂಜಿನಿಯರ್‌ಗಳಿಗೆ ತರಬೇತಿ ನೀಡುವ ಗುರಿಯನ್ನು ಭಾರತ ಹೊಂದಿದೆ ಎಂದು ತಿಳಿಸಿದ ಅವರು, ಈಗಾಗಲೇ ನಾಲ್ಕು ವರ್ಷಗಳಲ್ಲಿ ೭೦ ಸಾವಿರ ಮಂದಿಗೆ ತರಬೇತಿ ನೀಡಲಾಗಿದೆ. ದೇಶಾದ್ಯಂತ ವಿದ್ಯಾರ್ಥಿಗಳು ಈಗ ಚಿಪ್‌ಗಳನ್ನು ವಿನ್ಯಾಸಗೊಳಿಸುತ್ತಿದ್ದಾರೆ.

ಸುಮಾರು ೪೦೦ ಎಂಜಿನಿಯರಿಂಗ್ ಕಾಲೇಜುಗಳಿಗೆ ಉದ್ಯಮ-ಮಟ್ಟದ 'ಎಲೆಕ್ಟ್ರಾನಿಕ್ ಡಿಸೈನ್ ಆಟೊಮೇಷನ್' ಪರಿಕರಗಳು ಲಭ್ಯವಿದೆ ಎಂದು ಅವರು ಮಾಹಿತಿ ನೀಡಿದರು. ಸೆಮಿಕಂಡಕ್ಟರ್ ವಲಯಕ್ಕಾಗಿ ಭಾರತಕ್ಕೆ ಸ್ಪಷ್ಟವಾದ ೧೦ ವರ್ಷಗಳ ಕಾರ್ಯಯೋಜನೆಯ ಅಗತ್ಯವಿದೆ ಎಂದು ಪ್ರತಿಪಾದಿಸಿದ ಸಚಿವ ಅಶ್ವಿನಿ ವೈಷ್ಣವ್, ಸುಸ್ಥಿರ ಮತ್ತು ದೀರ್ಘಕಾಲೀನ ಬೆಳವಣಿಗೆಗಾಗಿ ಬಲವಾದ ಅಡಿಪಾಯ ನಿರ್ಮಿಸುವುದು ಭಾರತದ ವಿಧಾನವಾಗಿದೆ ಎಂದರು. 'ಇಂಡಿಯಾ ಸೆಮಿಕಂಡಕ್ಟರ್ ಮಿಷನ್ ೨.೦' ಆರು ಪ್ರಮುಖ ಕ್ಷೇತ್ರಗಳ ಮೇಲೆ ಗಮನಹರಿಸುತ್ತದೆ. ಇವುಗಳಲ್ಲಿ ಚಿಪ್ ವಿನ್ಯಾಸ, ಕಚ್ಚಾ ವಸ್ತುಗಳು, ಉತ್ಪಾದನೆ, ಜೋಡಣೆ-ಪರೀಕ್ಷೆ-ಗುರುತಿಸುವಿಕೆ ಮತ್ತು ಪ್ಯಾಕೇಜಿಂಗ್, ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ಸಂಗ್ರಹಣೆ ಸೇರಿವೆ ಎಂದು ಅವರು ತಿಳಿಸಿದರು.

<>><><*><><<>

ಪ್ರಾದೇಶಿಕ ಶಾಂತಿ, ಭದ್ರತೆ ಮತ್ತು ಸ್ಥಿರತೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ನಿರಂತರ ಸಹಕಾರ ಮತ್ತು ಸಮನ್ವಯ ಮುಂದುವರಿಸಲು ಭಾರತ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿವೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇಂದು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ದೂರವಾಣಿ ಕರೆ ಮಾಡಿ ಮಾತನಾಡಿದರು. ಉಭಯ ನಾಯಕರು ಪಶ್ಚಿಮ ಏಷ್ಯಾದ ಇತ್ತೀಚಿನ ಬೆಳವಣಿಗೆಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಇಂಧನ, ರಕ್ಷಣಾ, ತಂತ್ರಜ್ಞಾನ, ಹೂಡಿಕೆ ಮತ್ತು ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಭಾರತ-ಯುಎಇ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಕುರಿತು ಹೊಸ ಕ್ರಮಗಳ ಬಗ್ಗೆಯೂ ಅವರು ಚರ್ಚಿಸಿದರು. ಯುಎಇ ಅಧ್ಯಕ್ಷರು, ಭಾರತದ ಯಶಸ್ವಿ ಬ್ರಿಕ್ಸ್ ಅಧ್ಯಕ್ಷತೆಗಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಭಿನಂದಿಸಿದರು. ಬ್ರಿಕ್ಸ್ ಶೃಂಗಸಭೆಯಲ್ಲಿ ಯುವರಾಜ ಶೇಖ್ ಖಾಲೆದ್ ಭಾಗವಹಿಸಿದ್ದನ್ನು ಪ್ರಧಾನಿ ಮೋದಿ ಶ್ಲಾಘಿಸಿದರು. ಭಾರತದ ಅಧ್ಯಕ್ಷತೆಯಲ್ಲಿ ಬ್ರಿಕ್ಸ್‌ನಲ್ಲಿ ಮಹತ್ವದ ಫಲಿತಾಂಶಗಳನ್ನು ಸಾಧಿಸಲು ಯುಎಇ ನೀಡಿದ ಸಹಕಾರ ಮತ್ತು ಪಾಲುದಾರಿಕೆಗೆ ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದರು.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. 'ಜನ ಸೇವೆಯೇ ದೇಶ ಸೇವೆ' ಎಂಬ ಮಂತ್ರದಡಿ ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ

ಸರ್ಕಾರ ೨೦೪೭ರ ವೇಳೆಗೆ ವಿಕಸಿತ ಭಾರತ ಗುರಿ ಸಾಧನೆಯತ್ತ ಸಾಗುತ್ತಿದೆ. ಎಲ್ಲರನ್ನೊಳಗೊಂಡ ಅಭಿವೃದ್ಧಿ ಮತ್ತು ಸಾಮಾಜಿಕ ಸಬಲೀಕರಣದ ಮೂಲಕ ದೇಶದ ಜನರ ಜೀವನದಲ್ಲಿ ಮಹತ್ವದ ಪರಿವರ್ತನೆ ತರಲಾಗುತ್ತಿದೆ. ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದು 'ಸೆಮಿಕಂಡಕ್ಟರ್ ಮಿಷನ್-೨೦೨೧'ರ ಕುರಿತ ವರದಿ ಇದೀಗ ಮೂಡಿಬರಲಿದೆ.  ೨೦೨೧ ರ ಡಿಸೆಂಬರ್ ೨೧ ರಂದು 'ಸೆಮಿಕಾನ್ ಇಂಡಿಯಾ' ಯೋಜನೆಗೆ ಚಾಲನೆ ನೀಡಲಾಯಿತು. ೭೬ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಈ ಯೋಜನೆ ಜಾರಿಗೆ ಬಂದಿತು. ೨೦೨೧ರ ಜಾಗತಿಕ ಚಿಪ್ ಕೊರತೆಯು, ವಾಹನ ಹಾಗೂ ವಿದ್ಯುನ್ಮಾನ ಉತ್ಪಾದನಾ ರಂಗಗಳ ಮೇಲೆ ಭಾರಿ ಪ್ರಭಾವ ಬೀರಿದ ಹಿನ್ನೆಲೆಯಲ್ಲಿ, ಭಾರತ, ವಿದೇಶಿ ಪೂರೈಕೆ ಸರಪಳಿಯ ಮೇಲಿನ ತನ್ನ ಅವಲಂಬನೆ ತಗ್ಗಿಸಲು ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಯಿತು. ಈ ಬೃಹತ್ ಯೋಜನೆಯ ಉಸ್ತುವಾರಿ ಹಾಗೂ ಅನುಷ್ಠಾನಕ್ಕಾಗಿ 'ಇಂಡಿಯಾ ಸೆಮಿಕಂಡಕ್ಟರ್ ಮಿಷನ್' ಅನ್ನು ಸೃಜಿಸಲಾಯಿತು.  ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಸುಮಾರು ೧.೬ ಲಕ್ಷ ಕೋಟಿ ರೂಪಾಯಿ ಮೌಲ್ಯದ ೧೦ ಪ್ರಮುಖ ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಲ್ಲಿ ಎರಡು ಚಿಪ್ ತಯಾರಿಕಾ ಘಟಕಗಳು ಹಾಗೂ ಎಂಟು ಪ್ಯಾಕೇಜಿಂಗ್ ಘಟಕಗಳು ಸೇರಿವೆ. ಈ ಪೈಕಿ ನಾಲ್ಕು ಘಟಕಗಳಲ್ಲಿ ಈಗಾಗಲೇ ಪ್ರಾಯೋಗಿಕ ಉತ್ಪಾದನೆ ಪ್ರಾರಂಭವಾಗಿದೆ.  ಕೈಗಾರಿಕಾ ಸಾಮರ್ಥ್ಯವು ಒಂದೇ ಪ್ರದೇಶಕ್ಕೆ ಸೀಮಿತವಾಗದಂತೆ ಗುಜರಾತ್, ಅಸ್ಸಾಂ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಈ ಘಟಕಗಳನ್ನು ವಿಸ್ತರಿಸಲಾಗಿದೆ.

<>><><*><><<>

ಮಧ್ಯಪ್ರದೇಶದ ಕುನೋ ರಾಷ್ಟ್ರೀಯ ಉದ್ಯಾನದಲ್ಲಿ ಭಾರತದಲ್ಲಿಯೇ ಜನಿಸಿದ ಹೆಣ್ಣು ಚೀತಾ ನಾಲ್ಕು ಮರಿಗಳಿಗೆ ಜನ್ಮ ನೀಡಿದೆ.  'ಪ್ರಾಜೆಕ್ಟ್ ಚೀತಾ' ಅಡಿ ಇದೊಂದು ಮಹತ್ವದ ಮೈಲಿಗಲ್ಲಾಗಿದೆ. ಈ ಯೋಜನೆಯು ನಾಲ್ಕು ವರ್ಷಗಳನ್ನು ಪೂರೈಸಿದ ಮರುದಿನವೇ ಈ ಸಂತಸದ ಸುದ್ದಿ ವರದಿಯಾಗಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಹರ್ಷ ವ್ಯಕ್ತಪಡಿಸಿರುವ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್, ಈ ನಾಲ್ಕು ಮರಿಗಳ ಜನನವು ಭರವಸೆ, ಸ್ಥಿತಿಸ್ಥಾಪಕತ್ವ ಮತ್ತು ದೇಶದಲ್ಲಿ ಚೀತಾ ಸಂರಕ್ಷಣೆಗೆ ಹೆಚ್ಚುತ್ತಿರುವ ಯಶಸ್ಸಿನ ಸಂಕೇತವಾಗಿದೆ ಎಂದು ಹೇಳಿದ್ದಾರೆ. ಕುನೋ ರಾಷ್ಟ್ರೀಯ ಉದ್ಯಾನ ಹಾಗೂ ಪ್ರಾಜೆಕ್ಟ್ ಚೀತಾ ತಂಡಕ್ಕೆ ಸಚಿವರು ಅಭಿನಂದನೆ ಸಲ್ಲಿಸಿದ್ದಾರೆ.

<>><><*><><<>

ಭಾರತದ ಸೃಜನಶೀಲ ಆರ್ಥಿಕತೆಯು ವೇಗವಾಗಿ ಬೆಳೆಯುತ್ತಿದೆ. ಆಲೋಚನೆಗಳು, ಕಲ್ಪನಾಶಕ್ತಿ, ಸಂಸ್ಕೃತಿ, ನಾವೀನ್ಯತೆ ಮತ್ತು ಬೌದ್ಧಿಕ ಆಸ್ತಿಯು ಈ ಬೆಳವಣಿಗೆಗೆ ಚಾಲನೆ ನೀಡುತ್ತಿವೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಹೇಳಿದ್ದಾರೆ. ಹರಿಯಾಣದ ಸೋನಿಪಟ್‌ನಲ್ಲಿ ಒ.ಪಿ.ಜಿಂದಾಲ್ ಗ್ಲೋಬಲ್ ವಿಶ್ವವಿದ್ಯಾಲಯದಲ್ಲಿ ನಡೆದ 'ಕಾನೂನು, ನೀತಿ ಮತ್ತು ಸೃಜನಶೀಲ ಆರ್ಥಿಕತೆ' ಕುರಿತ ವಿಚಾರ ಸಂಕಿರಣ ಉದ್ದೇಶಿಸಿ ಅವರು ಮಾತನಾಡಿದರು. ಚಲನಚಿತ್ರ, ಸಂಗೀತ, ಗೇಮಿಂಗ್, ಅನಿಮೇಷನ್, ವಿನ್ಯಾಸ, ಪ್ರಕಾಶನ, ಜಾಹೀರಾತು ಮತ್ತು ಡಿಜಿಟಲ್ ವಿಷಯದಂತಹ ಕ್ಷೇತ್ರಗಳು ಉದ್ಯೋಗ ಮತ್ತು ಉದ್ಯಮಶೀಲತೆಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿವೆ. ಸೃಜನಶೀಲ ಆರ್ಥಿಕತೆಯು ಜಾಗತಿಕ ಜಿಡಿಪಿಗೆ ಶೇಕಡ ೩.೧ ರಷ್ಟು ಮತ್ತು ಜಾಗತಿಕ ಉದ್ಯೋಗದಲ್ಲಿ ಶೇಕಡ ೬.೨ ರಷ್ಟು ಕೊಡುಗೆ ನೀಡುತ್ತದೆ ಎಂದು ಅವರು ತಿಳಿಸಿದರು.  ಸುಮಾರು ೫.೬ ಕೋಟಿ ಭಾರತೀಯರು ಈಗಾಗಲೇ ಸಾಂಸ್ಕೃತಿಕ ಮತ್ತು ಸೃಜನಶೀಲ ವೃತ್ತಿಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಭಾರತದ ಮಾಧ್ಯಮ ಮತ್ತು ಮನರಂಜನಾ ವಲಯದ ಮೌಲ್ಯವು ಸುಮಾರು ೨.೫ ಟ್ರಿಲಿಯನ್ ರೂಪಾಯಿಗಳಷ್ಟಿದೆ ಎಂದು ಸಚಿವ ಡಾ.ಎಲ್.ಮುರುಗನ್ ಮಾಹಿತಿ ನೀಡಿದರು.

<>><><*><><<>

ಪಾಕಿಸ್ತಾನದ ಖೈಬರ್ ಪಖ್ತುಂಕ್ವಾ ಪ್ರಾಂತ್ಯದ ಕೊಹತ್ ಜಿಲ್ಲೆಯಲ್ಲಿ ಮಸೀದಿಯೊಂದರ ಬಳಿ ಇಂದು ಸಂಭವಿಸಿದ ಸ್ಫೋಟದಲ್ಲಿ ೧೫ ನಾಗರಿಕರು ಮೃತಪಟ್ಟಿದ್ದು, ೫೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು  ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ  ><><<>